# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರಮೇಶ್ ಬಾಬು ರವರು ಶೂನ್ಯ ವೇಳೆಯಲ್ಲಿ ಖಾಸಗಿ ಸಂಸ್ಥೆ ಮೊಟ್ಟೆ ಬಳಕೆ ಆರೋಗ್ಯಕ್ಕೆ ಅಪಾಯಕಾರಿ ಎಂದು ಪ್ರಚಾರ ಮಾಡಿರುವ ಕುರಿತು ಸದನದಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಸಂಬಂಧಿಸಿದಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ:**

**ಪ್ರಸ್ತಾವ:-**

ಮೊಟ್ಟೆ ಬಳಕೆಯು ಒಂದು ಪೌಷ್ಟಿಕ ಆಹಾರವಾಗಿದ್ದು, ಇಡೀ ದೇಶದಲ್ಲಿ ಮೊಟ್ಟೆಯನ್ನು ಬಳಸಲಾಗುತ್ತಿದೆ. ಆದರೆ ಒಂದು ಖಾಸಗಿ ಸಂಸ್ಥೆ ಮೊಟ್ಟೆ ಬಳಕೆ ಆರೋಗ್ಯಕ್ಕೆ ಅಪಾಯಕಾರಿ ಎಂದು ಯೂಟ್ಯೂಬ್‌ನಲ್ಲಿ ಪ್ರಚಾರ ಮಾಡಿರುವುದರಿಂದ ರಾಜ್ಯದ ಜನರಲ್ಲಿ ಆತಂಕ ಮನೆ ಮಾಡಿರುತ್ತದೆ. ದೇಶದಲ್ಲಿ 2024 ಮತ್ತು 25ನೇ ಸಾಲಿನಲ್ಲಿ ಅಂದಾಜು 150 ಬಿಲಿಯನ್ ಮೊಟ್ಟೆ ಉತ್ಪಾದನೆಯನ್ನು ಮಾಡಲಾಗಿದೆ. ಪ್ರಪಂಚದಲ್ಲಿ ಮೊಟ್ಟೆ ಉತ್ಪಾದನೆಯಲ್ಲಿ ಭಾರತ ಎರಡನೇ ಸ್ಥಾನದಲ್ಲಿರುತ್ತದೆ. ವಾರ್ಷಿಕ ಉತ್ಪಾದನೆಯಲ್ಲಿ ತನ್ನ ಮೇಲ್ಮೆಯನ್ನು ಸಾಧಿಸಿರುವ ಭಾರತ ಮೊಟ್ಟೆ ಬಳಕೆಗೆ ಉತ್ತೇಜನ ನೀಡುತ್ತಿದೆ. ದೇಶದ ಮೊಟ್ಟೆ ಉತ್ಪಾದನೆಯಲ್ಲಿ ಕರ್ನಾಟಕ 5ನೇ ಸ್ಥಾನದಲ್ಲಿದ್ದು ದೇಶದಲ್ಲಿ ಒಟ್ಟಾರೆಯಾಗಿ ಪೌಲ್ಟ್ರಿ ಮುಖಾಂತರ ಒಟ್ಟು ಉತ್ಪಾದನೆಯಲ್ಲಿ ಶೇಕಡ 84 ರಷ್ಟು ಮೊಟ್ಟೆಗಳನ್ನು ಪಡೆಯಲಾಗುತ್ತಿದೆ. ಉಳಿದಂತೆ ಶೇಕಡ 16ರಷ್ಟು ಮೊಟ್ಟೆ ಸ್ಥಳೀಯವಾಗಿ ದೊರೆಯುತ್ತದೆ. Per capita ಒಬ್ಬರಿಗೆ 106 ಮೊಟ್ಟೆಗಳು ಲಭ್ಯ ಇರುತ್ತದೆ. ವೈದ್ಯಕೀಯವಾಗಿ ಪೌಷ್ಟಿಕಾಂಶದ ಬಳಕೆಯ ಹಿನ್ನಲೆಯಲ್ಲಿ ಮೊಟ್ಟೆ ಬಳಕೆಗೆ ಉತ್ತೇಜನ ನೀಡಲಾಗುತ್ತಿದೆ. ಕರ್ನಾಟಕದಲ್ಲಿ ಶಾಲಾ ಮಕ್ಕಳಿಗೂ ಸಹ ಮೊಟ್ಟೆ ಬಳಕೆಗೆ ಅವಕಾಶ ಕಲ್ಪಿಸಲಾಗಿರುತ್ತದೆ. ಪ್ರತಿ ವರ್ಷ ಸುಮಾರು 1.5 ಮಿಲಿಯನ್ ಟನ್ ಮೊಟ್ಟೆಯನ್ನು ಭಾರತದಿಂದ ಹೊರದೇಶಕ್ಕೆ ರಫ್ತು ಮಾಡಲಾಗುತ್ತಿದೆ. ಮೊಟ್ಟೆ ಬಳಕೆಯಿಂದ ಕ್ಯಾನ್ಸರ್ ಬರುತ್ತಿದೆ ಎಂದು EGGOZ ಕಂಪನಿ ಅಪಪ್ರಚಾರ ಮಾಡುವ ಪ್ರಯತ್ನವನ್ನು ಮಾಡಿರುತ್ತದೆ. ಇದರ ಉದ್ದೇಶ ರಾಜ್ಯದ ಮತ್ತು ದೇಶದ ಮೊಟ್ಟೆ ಉತ್ಪಾದನೆಗೆ ತೊಂದರೆಯನ್ನು ಮಾಡುವ ದುರುದ್ದೇಶದಿಂದ ಕೂಡಿರುತ್ತದೆ. ಕರ್ನಾಟಕ ರಾಜ್ಯ ಸರ್ಕಾರವು ಇಂತಹ ಅಪಪ್ರಚಾರ ಮಾಡುವ ನಕಲಿ ಕಂಪನಿಗಳ ವಿರುದ್ಧ ನೇರವಾಗಿ ಕಾನೂನು ಕ್ರಮ ಕೈಗೊಳ್ಳಬೇಕಾಗಿರುತ್ತದೆ. ದೇಶದಲ್ಲಿ ಮೊಟ್ಟೆ ಉದ್ಯಮವನ್ನು ಕೋಳಿ ಉದ್ಯಮವನ್ನು ಗುರಿಯಾಗಿಸಿಕೊಂಡು ಈ ರೀತಿಯ ಅಪಪ್ರಚಾರವನ್ನು ಮಾಡಲಾಗಿರುತ್ತದೆ. ಜನರಲ್ಲಿ ತಪ್ಪು ಭಾವನೆ ಉಂಟು ಮಾಡುವ ಉದ್ದೇಶದಿಂದ ಮತ್ತು ಕುಕ್ಕಟ ಉದ್ಯಮಕ್ಕೆ ಗಾಸಿಗೊಳಿಸುವ ದುರುದ್ದೇಶದಿಂದ ಇಂತಹ ಅಪಪ್ರಚಾರ ಮಾಡಲಾಗಿದ್ದು, ರಾಜ್ಯ ಸರ್ಕಾರದ ಆರೋಗ್ಯ ಇಲಾಖೆ ಕೂಡಲೇ ಇವರ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸಬೇಕೆಂದು ಕೋರುತ್ತೇನೆ. ಇಂದಿನ ದಿನಪತ್ರಿಕೆಗಳಲ್ಲಿ ಖಾಸಗಿ ಯೂಟ್ಯೂಬ್ ಚಾನಲ್ ಮಾಡಿರುವ ಸುದ್ದಿಯು ಪ್ರಕಟವಾಗಿರುತ್ತದೆ. ಮೊಟ್ಟೆ ಬಳಕೆ ಕ್ಯಾನ್ಸರ್‌ಗೆ ಅವಕಾಶವಾಗುತ್ತದೆ ಎಂದು ತಪ್ಪು ಮಾಹಿತಿ ನೀಡುವುದರ ಮೂಲಕ ಜನರನ್ನು ತಪ್ಪು ದಾರಿಗೆ ಎಳೆಯುವ ಪ್ರಯತ್ನವನ್ನು ಈ ಖಾಸಗಿ ಕಂಪನಿ ಮಾಡಿರುತ್ತದೆ ಎಂದು ಪ್ರಸ್ತಾಪಿಸಲಾಗಿದೆ.

**ಹೇಳಿಕೆ:**

ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಹಾರ ಸುರಕ್ಷತಾ ವಿಭಾಗವು ಕೇಂದ್ರ ಸರ್ಕಾರದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006, ನಿಯಮಗಳು 2011 ಗಳನ್ನು ಜಾರಿಗೊಳಿಸುವ ಹೊಣೆಗಾರಿಕೆ ಹೊಂದಿರುತ್ತದೆ.

2024-25ನೇ ಸಾಲಿನಲ್ಲಿ ಮೊಟ್ಟೆ ಮತ್ತು ಮೊಟ್ಟೆಯ ಉತ್ಪನ್ನಗಳ 148 ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೊಳಪಡಿಸಲಾಗಿದ್ದು, ಎಲ್ಲಾ ಮಾದರಿಗಳು ಸುರಕ್ಷಿತ ಎಂದು ವರದಿಯಾಗಿರುತ್ತದೆ ಹಾಗೂ 2025-26ನೇ ಸಾಲಿನಲ್ಲಿ ಮೊಟ್ಟೆಗಳ 28 ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೊಳಪಡಿಸಲಾಗಿದ್ದು, ಎಲ್ಲಾ ಮಾದರಿಗಳು ಸುರಕ್ಷಿತ ಎಂದು ವರದಿಯಾಗಿರುತ್ತವೆ.

ಖಾಸಗಿ ಸಂಸ್ಥೆ ಮೊಟ್ಟೆ ಬಳಕೆ ಆರೋಗ್ಯಕ್ಕೆ ಅಪಾಯಕಾರಿ ಎಂಬ ಸುದ್ದಿಯು ಸಾಮಾಜಿಕ ಜಾಲತಾಣಗಳಲ್ಲಿ ಭಿತ್ತರವಾಗಿರುವ ಹಿನ್ನೆಲೆಯಲ್ಲಿ ಬೆಂಗಳೂರು ನಗರ ಮತ್ತು ಬಿಬಿಎಂಪಿ ವ್ಯಾಪ್ತಿಗಳಲ್ಲಿ ವಿಶೇಷ ಆಂದೋಲನವನ್ನು ಕೈಗೊಳ್ಳುವ ಮೂಲಕ ವಿವಿಧ ಸಂಸ್ಥೆಗಳ ಮೊಟ್ಟೆಯ 11 ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೊಳಪಡಿಸಲಾಗಿದ್ದು, ವಿಶ್ಲೇಷಣಾ ಕಾರ್ಯವು ಪ್ರಗತಿಯಲ್ಲಿರುತ್ತದೆ. ವಿಶ್ಲೇಷಣ ವರದಿ ಬಂದ ನಂತರ ಮುಂದಿನ ಕಾನೂನಾತ್ಮಕ ಕ್ರಮವನ್ನು ಜರುಗಿಸಲಾಗುವುದು.

ಅಲ್ಲದೆ ಕೇಂದ್ರ ಆಹಾರ ಸುರಕ್ಷಿತ ಪ್ರಾಧಿಕಾರವು ಕರ್ನಾಟಕದಲ್ಲಿ 25 ಮಾದರಿಗಳನ್ನು ಸಂಗ್ರಹಿಸಿದ್ದು ಪರೀಕ್ಷೆಗೆ ಒಳಪಡಿಸಿದ್ದಾರೆ. ಸದರಿ ಖಾಸಗಿ ಜಾಲತಾಣದಲ್ಲಿ EGGOZ ಮೊಟ್ಟೆಗಳಲ್ಲಿ AOZ (3-Amino-2-oxazolidinone) ಅಂಶಗಳಿರುವುದಾಗಿ ಬಿತ್ತರ ಮಾಡಿರುತ್ತಾರೆ.

(AOZ is a metabolite of nitro furans, a class of antibiotics banned for use in food-producing animals)

ಕಡತ ಸಂಖ್ಯೆ: ಆಕುಕ 191 ಎಸ್‌ಬಿವಿ 2025

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು